ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಬಂದಿದೆ.

ಆ) ಯೋಜನೆಯಲ್ಲಿ ಲಭ್ಯವಾಗುವ ಹಣದ ಮಿತಿಯಲ್ಲಿ ಪರಿಶೀಲಿಸಲಾಗುವುದು.

ಕನ್ನಡ ಗ್ರಂಥಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

೩೫ (೧೬೮) ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಆಥಣಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಕನ್ನಡದಲ್ಲಿ ಪ್ರಕಟವಾಗುವ ಗ್ರಂಥಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ೫೦೦ ಗ್ರಂಥಗಳನ್ನು ಕೊಳ್ಳಲು ಸರ್ಕಾರದವರು ನಿರ್ಧರಿಸಿದ್ದಾರೆಯೇ ?

ಆ) ಹಾಗಿದ್ದಲ್ಲಿ ಈ ನಿರ್ಧಾರ ಎಂದಿನಿಂದ ಜಾರಿಗೆ ಬರುತ್ತದೆ ?

ಇ) ಈ ಕೊಳ್ಳುವಿಕೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಯ ಬರಹಗಾರರ ಪ್ರಾತಿನಿಧ್ಯ ಪುಸ್ತಕ ಕೊಳ್ಳುವ ಬಗ್ಗೆ ನೀತಿಯೊಂದನ್ನು ರೂಪಿಸಲಾಗುವುದೇ ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಕನ್ನಡ ಸಾಹಿತ್ಯ ಅಕಾಡಮಿಯ ಬಹುಮಾನಿತ ಎಲ್ಲಾ ಪುಸ್ತಕಗಳನ್ನು ಮತ್ತು ನ್ಯಾಷನಲ್ ಬುಕ್ ಟ್ರಸ್ಟ್‌ರವರಿಂದ ಪ್ರಕಟಗೊಳ್ಳುವ ಎಲ್ಲಾ ಪುಸ್ತಕಗಳನ್ನು ಕೊಂಡುಕೊಳ್ಳಲು ಆದೇಶಗಳಿವೆ.

ರಾಜ್ಯದಲ್ಲಿ ಪ್ರಾರಂಭವಾಗಿರುವ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಬಗ್ಗೆ

೩೭ (೬೫) ಶ್ರೀ ಕೆ. ಹೆಚ್. ಪಾಟೀಲ್ (ಗದಗ್).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಕಳೆದ ಎರಡು ವರ್ಷಗಳಿಂದ ಸರ್ಕಾರದಿಂದ ಮಂಜೂರಾದ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಸಂಖ್ಯೆ ಎಷ್ಟು ?

ಆ) ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಭಿನ್ನಭಿನ್ನವಾದ ಪಠ್ಯ ಕ್ರಮವನ್ನು ಅಳವಡಿಸಿರುವುದು ನಿಜವೇ ?

ಇ) ಹಾಗಿದ್ದರೆ ಭೇದಭಾವ ಯಾಕೆ ?

ಈ) ಪರಿಷ್ಕೃತ ಪಠ್ಯಕ್ರಮ ಜಾರಿಗೊಳಿಸಲು ತಗಲುವ ಖರ್ಚು ಎಷ್ಟು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಸರ್ಕಾರದಿಂದ ಕಳೆದ ಎರಡು ವರ್ಷಗಳಲ್ಲಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳು ಪ್ರಾರಂಭಿಸಲು ಅನುಮತಿ ನೀಡಲಾದ ಸಂಖ್ಯೆ ಅನುಕ್ರಮವಾಗಿ ೬ ಮತ್ತು ೬೨ ಇವೆ.

ಆ) ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್‌ನಲ್ಲಿ ಪಠ್ಯಕ್ರಮವನ್ನು ಪರಿಷ್ಕೃತ ಮಾಡಲಾಗಿದೆ. ಈ ಪರಿಷ್ಕೃತ ಪಠ್ಯಕ್ರಮವನ್ನು ೧೯೮೪–೮೫ನೇ ಸಾಲಿನಿಂದ ಬೆಂಗಳೂರಿನ ಎಸ್.ಜೆ. (ಸರ್ಕಾರಿ) ಪಾಲಿಟೆಕ್ನಿಕ್‌ನಲ್ಲಿ ಅಳವಡಿಸಲಾಗಿದೆ. ಮತ್ತು ೧೯೮೫–೮೬ನೇ ಸಾಲಿನಿಂದ ಈ ಪರಿಷ್ಕೃತ ಪಠ್ಯಕ್ರಮವನ್ನು ನಾಲ್ಕು ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಜಾರಿಗೊಳಿಸಲು ಸರ್ಕಾರ ಈಗಾಗಲೇ ಮಂಜೂರಾತಿ ನೀಡಿದೆ. ಉಳಿದ ಸರ್ಕಾರಿ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪರಿಷ್ಕೃತ ಪಠ್ಯಕ್ರಮ ಹಣಕಾಸಿನ ಪರಿಸ್ಥಿತಿಯನ್ನು ಗಮನಿಸಿ ಜಾರಿಗೊಳಿಸಲು ಉದ್ದೇಶಿಸಲಾಗಿದೆ.